# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 738(855) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಸುನಿಲ್ ವಲ್ಲಾಪುರ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 16.12.2024 |

<table>
<tr><th colspan="2">ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಉನ್ನತ ಶಿಕ್ಷಣ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ, ಖಾಸಗಿ ಮತ್ತು ಡಿಮ್ಡ್ ವಿಶ್ವವಿದ್ಯಾಲಯಗಳು ಎಷ್ಟು; ಅವು ಯಾವುವು; ಯಾವ ವರ್ಷದಲ್ಲಿ ಪ್ರಾರಂಭಗೊಂಡಿವೆ. ಅವುಗಳ ವ್ಯಾಪ್ತಿ ಎಷ್ಟು (ವಿವರವಾದ ಮಾಹಿತಿ ನೀಡುವುದು)</td><td>ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ವಿಶ್ವವಿದ್ಯಾಲಯಗಳು.<br><table><tr><th>ಸರ್ಕಾರಿ</th><th>ಖಾಸಗಿ</th><th>ಡೀಮ್ಡ್</th></tr><tr><td>32</td><td>30</td><td>12</td></tr></table>ಸದರಿ ವಿಶ್ವವಿದ್ಯಾಲಯಗಳ ಹೆಸರು, ಪ್ರಾರಂಭವಾದ ವರ್ಷ, ಕ್ಷೇತ್ರ ವ್ಯಾಪ್ತಿಯ ವಿವರವಾದ ಮಾಹಿತಿಯನ್ನು ಅನುಬಂಧ – 1 ರಲ್ಲಿರಿಸಿದೆ.</td></tr>
<tr><td>(ಆ)</td><td>ಸದರಿ ವಿಶ್ವವಿದ್ಯಾಲಯಗಳಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಕುಲಪತಿಗಳು, ಕುಲಸಚಿವರು(ಆಡಳಿತ) ಮತ್ತು ಕುಲಸಚಿವರು (ಪರೀಕ್ಷೆ) ಯಾರು; (ವಿವರವಾಗಿ ಹೆಸರು ವಿಳಾಸ, ದೂರವಾಣಿ/ಮೊಬೈಲ್ ಸಂಖ್ಯೆಗಳೊಂದಿಗೆ ಮಾಹಿತಿ ನೀಡುವುದು;</td><td>ಮಾಹಿತಿಯನ್ನು ಅನುಬಂಧ-2ರಲ್ಲಿ ನೀಡಲಾಗಿದೆ.</td></tr>
<tr><td>(ಇ)</td><td>ತುಮಕೂರು ವಿಶ್ವವಿದ್ಯಾಲಯದ ದಿನಾಂಕ:24.10.2010ರ ಜಾಹಿರಾತಿನನ್ವಯ ಆಯ್ಕೆಯಾದ ಸಹಾಯಕ, ಸಹ ಪ್ರಾಧ್ಯಾಪಕರ ಹುದ್ದೆಗಳ ಆಯ್ಕೆ ಪಟ್ಟಿಯನ್ನು ನೀಡುವುದು.</td><td>ತುಮಕೂರು ವಿಶ್ವವಿದ್ಯಾಲಯದಲ್ಲಿ ಸಹಾಯಕ, ಸಹ ಪ್ರಾಧ್ಯಾಪಕರ ಹುದ್ದೆಗಳ ನೇಮಕಾತಿಗಾಗಿ ದಿನಾಂಕ: 24.10.2010ರಂದು ಯಾವುದೇ ಜಾಹೀರಾತು ನೀಡಿರುವುದಿಲ್ಲ.</td></tr>
</table>

| | | |
|---|---|---|
| (ಈ) | ರಾಷ್ಟ್ರೀಯ ಶಿಕ್ಷಣ (NEP) ನೀತಿ ಅಡಿಯಲ್ಲಿ ತೇಗಡೆಗೊಂಡಿರುವ ವಿದ್ಯಾರ್ಥಿಗಳಿಗೆ ಇಲ್ಲಿಯವರೆಗೂ ಅಂಕ ಪಟ್ಟಿಗಳನ್ನು ನೀಡದಿರಲು ಕಾರಣಗಳೇನು; ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ಹಾಗೂ ಯಾವ ಕಾಲ ಮಿತಿಯಲ್ಲಿ ವಿದ್ಯಾರ್ಥಿಗಳಿಗೆ ಅಂಕಪಟ್ಟಿಗಳನ್ನು ನೀಡಲಾಗುವುದು? | ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಇಜಿಒವಿ 2023, ದಿನಾಂಕ: 16.10.2023ರಲ್ಲಿ 2023-24ನೇ ಶೈಕ್ಷಣಿಕ ಸಾಲಿನಿಂದ ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿನ ಅಧೀನ ಇಲಾಖೆಗಳು, ಸಾರ್ವಜನಿಕ ವಿಶ್ವವಿದ್ಯಾಲಯಗಳು ಹಾಗೂ ಎಲ್ಲಾ ಶೈಕ್ಷಣಿಕ ಸಂಸ್ಥೆಗಳು ಪದವಿ ಮತ್ತು ಸ್ನಾತಕೋತ್ತರ ಪದವಿ ಅಂಕಪಟ್ಟಿಗಳು, ಪ್ರಮಾಣ ಪತ್ರಗಳು ಮತ್ತು ಇತರೆ ಶೈಕ್ಷಣಿಕ ದಾಖಲೆಗಳನ್ನು NAD-Digilockerನಲ್ಲಿ ಡಿಜಿಟಲ್ ರೂಪದಲ್ಲಿ ಕಡ್ಡಾಯವಾಗಿ ಸಂಗ್ರಹಿಸಿಡಲು, ಉನ್ನತ ಶಿಕ್ಷಣದ ವಿದ್ಯಾರ್ಥಿಗಳು ಸದರಿ ಅಂಕಪಟ್ಟಗಳ Credits ಗಳನ್ನು Academic Bank of Credit (ABC) ನಲ್ಲಿ ಕಡ್ಡಾಯವಾಗಿ ನೊಂದಾಯಿಸಿಕೊಳ್ಳಲು ಆದೇಶಿಸಿ, ವಿವಿಧ ನೇಮಕಾತಿ ಪ್ರಾಧಿಕಾರಗಳು/ಸಂಸ್ಥೆಗಳು ನೇಮಕಾತಿ ಸಮಯದಲ್ಲಿ NAD-Digilokcer ನಲ್ಲಿನ ಅಂಕಪಟ್ಟಿ ಹಾಗೂ ಪ್ರಮಾಣ ಪತ್ರಗಳನ್ನು ದೃಢೀಕೃತವೆಂದು ಪರಿಗಣಿಸುವಂತೆ ನಿರ್ದೇಶಿಸಿದೆ. |

ಇಡಿ/ 664/ ಯುಆರ್‌ಸಿ/ 2024

(ಡಾ|| ಎಂ.ಸಿ ಸುಧಾಕರ್)
ಉನ್ನತ ಶಿಕ್ಷಣ ಸಚಿವರು.